All India Radio: Bangalore
National Bulletin In Kannada
21.08.2024 01.10 p.m.

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
21.08.2024 01.10 p.m.

****************

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ಸಿಐಐ ಇಂಡಿಯಾ, ಆಫ್ರಿಕಾ ಬಿಸಿನೆಸ್ ಕಾನ್ಕ್ಲೇವ್ ಉದ್ಘಾಟನಾ ಸಮಾರಂಭ ಉದ್ದೇಶಿಸಿ ಉಪರಾಷ್ಟ್ರಪತಿ ಭಾಷಣ
2. ಪೋಲೆಂಡ್ ಮತ್ತು ಉಕ್ರೇನ್ ಪ್ರವಾಸ ಕೈಗೊಂಡ ಪ್ರಧಾನಿ ನರೇಂದ್ರ ಮೋದಿ
3. ನವದೆಹಲಿಯಲ್ಲಿಂದು ಐರೋಪ್ಯ ಒಕ್ಕೂಟ-ಭಾರತ ಸಮ್ಮೇಳನ; ಅಂತಾರ್ಜಾಲದಲ್ಲಿ ಭಯೋತ್ಪಾದಕತೆ ಒಡ್ಡುವ ಸವಾಲುಗಳನ್ನು ಎದುರಿಸಲು ಉಭಯ ರಾಷ್ಟ್ರಗಳು ಬದ್ಧ
4. ಭಾರತದ ಖಾಸಗಿ ಕಾರ್ಪೊರೇಟ್ ಹೂಡಿಕೆಯು, ಕಳೆದ ವರ್ಷಕ್ಕಿಂತ ಶೇಕಡ 54 ರಷ್ಟು ಏರಿಕೆ – ಆರ್‌ಬಿಐ ಅಧ್ಯಯನ

****************

ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು, ನವದೆಹಲಿಯಲ್ಲಿಂದು 19ನೇ ಸಿಐಐ ಇಂಡಿಯಾ ಆಫ್ರಿಕಾ ಬಿಸಿನೆಸ್ ಕಾನ್ಕ್ಲೇವ್‌ನ ಉದ್ಘಾಟನಾ ಸಮಾರಂಭವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಮೂರು ದಿನಗಳ ಸಮಾವೇಶದ ವಿಷಯ ಒಂದು ಭವಿಷ್ಯವನ್ನು ರಚಿಸುವುದಾಗಿದೆ. ಈ ಸಮಾವೇಶದಲ್ಲಿ ವ್ಯಾಪಾರ, ಹೂಡಿಕೆ, ಮೂಲಸೌಕರ್ಯ, ಆರೋಗ್ಯ ಮತ್ತು ತಂತ್ರಜ್ಞಾನದಂತಹ ಕ್ಷೇತ್ರಗಳ ಮೇಲೆ ಕೇಂದ್ರೀಕರಿಸುತ್ತದೆ. ನಿನ್ನೆಯಿಂದ ಸಮಾವೇಶ ಆರಂಭವಾಗಿದೆ. 47 ಆಫ್ರಿಕನ್ ರಾಷ್ಟ್ರಗಳು ಸೇರಿ 65 ದೇಶಗಳಿಂದ 11 ನೂರಕ್ಕೂ ಹೆಚ್ಚು ಅಂತಾರಾಷ್ಟ್ರೀಯ ಪ್ರತಿನಿಧಿಗಳು ಸಮಾವೇಶದಲ್ಲಿ ಭಾಗವಹಿಸುತ್ತಿದ್ದಾರೆ.

****************

ಮಧ್ಯ ಯುರೋಪ್‌ನಲ್ಲಿ ಪೋಲೆಂಡ್ ಪ್ರಮುಖ ಆರ್ಥಿಕ ಪಾಲುದಾರ ರಾಷ್ಟ್ರವಾಗಿದೆ. ಪ್ರಜಾಪ್ರಭುತ್ವ ಮತ್ತು ಬಹುತ್ವಕ್ಕೆ ಭಾರತ ಮತ್ತು ಪೋಲೆಂಡ್ ಪರಸ್ಪರ ಬದ್ಧತೆ ಉಭಯ ರಾಷ್ಟ್ರಗಳ ನಡುವಿನ ಸಂಬಂಧವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಇಂದು ಬೆಳಗ್ಗೆ ಪ್ರಧಾನಿ ನರೇಂದ್ರ ಮೋದಿ, ಪೋಲೆಂಡ್ ಮತ್ತು ಉಕ್ರೇನ್‌ಗೆ ತಮ್ಮ ಅಧಿಕೃತ ಭೇಟಿಯ ಮೊದಲು ತಮ್ಮ ನಿರ್ಗಮನ ಹೇಳಿಕೆಯಲ್ಲಿ, ಎರಡೂ ದೇಶಗಳು ತಮ್ಮ ರಾಜತಾಂತ್ರಿಕ ಸಂಬಂಧ 70 ವರ್ಷಗಳನ್ನು ಪೂರೈಸುತ್ತಿರುವ ಸಂದರ್ಭದಲ್ಲಿ ಪೋಲೆಂಡ್‌ಗೆ ಭೇಟಿ ನೀಡುತ್ತಿರುವುದಾಗಿ ತಿಳಿಸಿದ್ದಾರೆ.

ಪಾಲುದಾರಿಕೆಯನ್ನು ಮತ್ತಷ್ಟು ಮುನ್ನಡೆಸಲು ತಮ್ಮ ಸ್ನೇಹಿತ ಪೋಲೆಂಡ್ ಪ್ರಧಾನಿ ಡೊನಾಲ್ಡ್ ಟಸ್ಕ್ ಮತ್ತು ಅಧ್ಯಕ್ಷ ಆಂಡ್ರೆಜ್ ಡುಡಾ ಅವರನ್ನು ಭೇಟಿ ಮಾಡಲು ಎದುರು ನೋಡುತ್ತಿರುವುದಾಗಿ ಹೇಳಿದರು. ಪೋಲೆಂಡ್‌ನಲ್ಲಿರುವ ಭಾರತೀಯ ಸಮುದಾಯದ ಸದಸ್ಯರೊಂದಿಗೂ ಸಹ ಮಾತುಕತೆ ನಡೆಸುವುದಾಗಿ ತಿಳಿಸಿದರು.

ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರ ಆಹ್ವಾನದ ಮೇರೆಗೆ ಉಕ್ರೇನ್‌ಗೆ ಭೇಟಿ ನೀಡುತ್ತಿರುವುದಾಗಿ ತಿಳಿಸಿದ ಪ್ರಧಾನಿ ನರೇಂದ್ರ ಮೋದಿ, ಭಾರತದ ಪ್ರಧಾನಿಯೊಬ್ಬರು ಉಕ್ರೇನ್‌ಗೆ ನೀಡಲಿರುವ ಮೊದಲ ಭೇಟಿ ಇದಾಗಿದೆ ಎಂದು ಹೇಳಿದರು.

ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸಲು ಮತ್ತು ಉಕ್ರೇನ್ ಸಂಘರ್ಷದ ಶಾಂತಿಯುತ ಪರಿಹಾರದ ಬಗ್ಗೆ ದೃಷ್ಟಿಕೋನಗಳನ್ನು ಹಂಚಿಕೊಳ್ಳಲು ಅಧ್ಯಕ್ಷ ಝೆಲೆನ್ಸ್ಕಿಯೊಂದಿಗಿನ ಮಾತುಕತೆ ನಡೆಸುವ ಅವಕಾಶವನ್ನು ಎದುರು ನೋಡುತ್ತಿರುವುದಾಗಿ ಹೇಳಿದರು.

ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆ ಶೀಘ್ರ ಮರಳುವಿಕೆಯ ಭರವಸೆಯನ್ನು ವ್ಯಕ್ತಪಡಿಸಿದ ಪ್ರಧಾನಿ, ಈ ಭೇಟಿಯು ಉಭಯ ದೇಶಗಳೊಂದಿಗಿನ ವ್ಯಾಪಕ ಸಂಪರ್ಕಗಳ ಸ್ವಾಭಾವಿಕ ಮುಂದುವರಿಕೆಯಾಗಿ ಕಾರ್ಯನಿರ್ವಹಿಸಲಿದೆ ಎಂದು ತಿಳಿಸಿದರು.

****************

ಅಂತರ್ಜಾಲದಲ್ಲಿ ಭಯೋತ್ಪಾದನೆ ಮತ್ತು ಉಗ್ರಗಾಮಿಗಳ ಕುರಿತ ಮಾಹಿತಿ ಒಡ್ಡುವ ಸವಾಲುಗಳನ್ನು ಎದುರಿಸಲು ಜಂಟಿ ಮತ್ತು ಪ್ರಾದೇಶಿಕ ಪ್ರಯತ್ನಕ್ಕೆ ಭಾರತದಲ್ಲಿರುವ ಐರೋಪ್ಯ ಒಕ್ಕೂಟದ ರಾಯಭಾರಿ ಹರ್ವ್ ಡೆಲ್ಫಿನ್ ಕರೆ ನೀಡಿದ್ದಾರೆ.

ಇಂದು ನಡೆದ ಐರೋಪ್ಯ–ಭಾರತ ಸಮ್ಮೇಳನ ಸಭೆಯನ್ನುದ್ದೇಶಿಸಿ ಮಾತನಾಡಿದ ಡೆಲ್ಫಿನ್, ಆನ್‌ಲೈನ್‌ನಲ್ಲಿ ಉಗ್ರಗಾಮಿ ಮತ್ತು ಭಯೋತ್ಪಾದಕ ವಿಷಯಗಳು ಒಡ್ಡುವ ಸವಾಲುಗಳನ್ನು ಎದುರಿಸುವಲ್ಲಿ ಯುರೋಪಿಯನ್ ಒಕ್ಕೂಟ ಬದ್ಧತೆ ಹೊಂದಿದೆ. ಆನ್‌ಲೈನ್ ನೆಟ್‌ವರ್ಕ್ ಭಯೋತ್ಪಾದನೆ ಕುರಿತು ಸಕಾರಾತ್ಮಕ ಹಾಗೂ ನಕರಾತ್ಮಕ ಎರಡೂ ಸಂಗತಿಗಳನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

ಯೂನಿಯನ್, ಜಾಗತಿಕ ಭಯೋತ್ಪಾದನಾ ನಿಗ್ರಹ ಮಂಡಳಿ ಮತ್ತು ವ್ಯವಹಾರಗಳ ಸಚಿವಾಲಯದೊಂದಿಗೆ ಆನ್‌ಲೈನ್‌ನಲ್ಲಿ ಭಯೋತ್ಪಾದಕತೆಯನ್ನು ಎದುರಿಸಲು ಎರಡು ದಿನ ಇಯು –ಭಾರತ ವಿದೇಶಾಂಗ ಸಚಿವಾಲಯಗಳು 1.5 ಸಮ್ಮೇಳನವನ್ನು ಆಯೋಜಿಸಿದೆ. ಈ ಪ್ರಾದೇಶಿಕ ಸಮ್ಮೇಳನ, ಡಿಜಿಟಲ್ ಕ್ಷೇತ್ರದಲ್ಲಿ ಹಿಂಸಾತ್ಮಕ ಉಗ್ರವಾದವು ಒಡ್ಡುವ ಸವಾಲುಗಳನ್ನು ಪರಿಹರಿಸುವ ಗುರಿಯನ್ನು ಹೊಂದಿದೆ.

ಡಿಜಿಟಲ್ ಉಗ್ರವಾದದ ವಿರುದ್ಧದ ಹೋರಾಟದಲ್ಲಿ ಮುಂಚೂಣಿಯಲ್ಲಿರುವ ದಕ್ಷಿಣ ಏಷ್ಯಾ ಮತ್ತು ಯುರೋಪ್‌ನ ತಜ್ಞರು, ನೀತಿ ನಿರೂಪಕರು, ಮತ್ತು ಕಾನೂನು ಜಾರಿ ಅಧಿಕಾರಿಗಳು ಸಮಾವೇಶದಲ್ಲಿ ಭಾಗಿಯಾಗಿದ್ದಾರೆ.

****************

ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯ, ಇದೇ ತಿಂಗಳ 23 ರಂದು ರಾಷ್ಟ್ರೀಯ ಬಾಹ್ಯಾಕಾಶ ದಿನವನ್ನು ಆಚರಿಸಲು ಸರಣಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಕಾರ್ಯಕ್ರಮಗಳು ಜೆಎನ್‌ಪಿ ಬೆಂಗಳೂರು ಆವರಣದಲ್ಲಿ ನಡೆಯಲಿದ್ದು, ಸಾರ್ವಜನಿಕರಿಗೆ ಉಚಿತ ಪ್ರವೇಶವಿರಲಿದೆ.

7 ರಿಂದ 10 ನೇ ತರಗತಿವರೆಗಿನ ವಿದ್ಯಾರ್ಥಿಗಳಿಗೆ ಅಂದು ಬೆಳಗ್ಗೆ 11 ಗಂಟೆಗೆ ಪೇಂಟಿಂಗ್ ಮತ್ತು ಮಧ್ಯಾಹ್ನ 2.15 ಕ್ಕೆ ಪಿಕ್ ಅಂಡ್ ಸ್ಪೀಚ್ ಸ್ಪರ್ಧೆಗಳು ನಡೆಯಲಿವೆ. 7 ರಿಂದ 12 ತರಗತಿವರೆಗಿನ ವಿದ್ಯಾರ್ಥಿಗಳಿಗೆ 'ಜಿಗ್ ಸಾ ಪಜಲ್' ಚಟುವಟಿಕೆಯಲ್ಲಿ ತೊಡಗಬಹುದು. 4 ರಿಂದ 6 ತರಗತಿವರೆಗಿನ ವಿದ್ಯಾರ್ಥಿಗಳಿಗೆ ಬೆಳಗ್ಗೆ 11 ಗಂಟೆಗೆ ಜಿಗ್ ಸಾ ಪಜಲ್ ಚಟುವಟಿಕೆ ಇರಲಿದೆ. 12 ವರ್ಷ ಮೇಲ್ಪಟ್ಟರಿಗೆ ವಾಕ್–ಇನ್ ರಸಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿದ್ದು, ಆಸಕ್ತ ವಿದ್ಯಾರ್ಥಿಗಳು ಭಾಗವಹಿಸಬಹುದು.

ಮಧ್ಯಾಹ್ನ 12:30 ಕ್ಕೆ 'ಮೂನ್: ಎ ಟೂಲ್ ಫಾರ್ ಫಿಸಿಕ್ಸ್ ಲೆಸನ್ಸ್' ಮತ್ತು ಮಧ್ಯಾಹ್ನ 3:45 ಕ್ಕೆ 'ದಿ ಎಕ್ಸೈಟಿಂಗ್ ಜರ್ನಿ ಆಫ್ ಚಂದ್ರಯಾನ' ಸೇರಿದಂತೆ ಉಪನ್ಯಾಸಗಳನ್ನು ಹಮ್ಮಿಕೊಳ್ಳಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜವಹರ್‌ಲಾಲ್ ನೆಹರು ತಾರಾಲಯ, ಬೆಂಗಳೂರು ದೂರವಾಣಿ ಸಂಖ್ಯೆ 080–2237–9725 ಮತ್ತು 080–2226–6084 ಕ್ಕೆ ಕರೆ ಮಾಡಬಹುದಾಗಿದೆ ಎಂದು ತಾರಾಲಯದ ಪ್ರಕಟಣೆ ತಿಳಿಸಿದೆ.

****************

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಇದೇ ಶುಕ್ರವಾರದಿಂದ ನಾಲ್ಕು ದಿನಗಳ ಅಮೇರಿಕಾ ಪ್ರವಾಸ ಕೈಗೊಳ್ಳಲಿದ್ದಾರೆ.

ಪ್ರವಾಸ ಸಂದರ್ಭದಲ್ಲಿ ಅಮೆರಿಕ ಕಾರ್ಯದರ್ಶಿ ಆಸ್ಟಿನ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದು, ಭಾರತ–ಅಮೆರಿಕ ಸಂಬಂಧವೃದ್ಧಿ ಮತ್ತು ರಕ್ಷಣಾ ಕ್ಷೇತ್ರದ ವಿವಿಧ ವಲಯಗಳಲ್ಲಿ ತೊಡಗಿಸಿಕೊಳ್ಳುವಿಕೆಯ ಹಿನ್ನೆಲೆಯಲ್ಲಿ ಈ ಭೇಟಿ ಮಹತ್ವ ಪಡೆದುಕೊಂಡಿದೆ.

ಭೇಟಿಯ ವೇಳೆ ಅವರು ಭಾರತೀಯ ಸಮುದಾಯದವರೊಂದಿಗೆ ಸಂವಾದ ನಡೆಸಲಿದ್ದಾರೆ.

****************

ಭಾರತದ ಖಾಸಗಿ ಕಾರ್ಪೊರೇಟ್ ಹೂಡಿಕೆಯು, ಕಳೆದ ವರ್ಷ 1 ಲಕ್ಷದ 59 ಸಾವಿರದ 221 ಕೋಟಿ ರೂಪಾಯಿಗಳಿಂದ 2024–25 ರಲ್ಲಿ 2 ಲಕ್ಷ 45 ಸಾವಿರದ 212 ಕೋಟಿ ರೂಪಾಯಿಗಳಿಗೆ ಶೇಕಡ 54 ರಷ್ಟು ಏರಿಕೆಯಾಗಲಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್–ಆರ್‌ಬಿಐ ಅಧ್ಯಯನ ತಿಳಿಸಿದೆ.

2023–24ರಲ್ಲಿ ಖಾಸಗಿ ಕಾರ್ಪೊರೇಟ್ ವಲಯದಿಂದ ಉದ್ದೇಶಿಸಲಾದ ಒಟ್ಟು ಬಂಡವಾಳ ವೆಚ್ಚವು ಹಿಂದಿನ ವರ್ಷಕ್ಕಿಂತ ಸುಮಾರು ಶೇಕಡ 57 ರಷ್ಟು ಹೆಚ್ಚಾಗಿದೆ ಅಧ್ಯಯನ ಮಾಹಿತಿ ನೀಡಿದೆ.

****************

ಭಾರತೀಯ ರಿಸರ್ವ್ ಬ್ಯಾಂಕ್–ಆರ್‌ಬಿಐ, ಪದವಿಪೂರ್ವ ಹಂತದ ಕಾಲೇಜು ವಿದ್ಯಾರ್ಥಿಗಳಿಗೆ ಆರ್‌ಬಿಐ–90 ರಸಪ್ರಶ್ನೆಯನ್ನು ಪ್ರಾರಂಭಿಸಿದೆ. ಆರ್‌ಬಿಐನ 90 ವರ್ಷಗಳ ಕಾರ್ಯನಿರ್ವಹಣೆಯ ಸ್ಮರಣಾರ್ಥ ಈ ಕಾರ್ಯಕ್ರಮವನ್ನು ರಾಷ್ಟ್ರವ್ಯಾಪಿ ಆಯೋಜಿಸಿದೆ.

ಆರ್‌ಬಿಐ–90 ರಸಪ್ರಶ್ನೆ ಕಾರ್ಯಕ್ರಮ ಸಾಮಾನ್ಯ ಜ್ಞಾನ ಆಧಾರಿತವಾಗಿದ್ದು ಬಹು–ಹಂತದ ಸ್ಪರ್ಧೆಯನ್ನು ಒಳಗೊಂಡಿರುತ್ತದೆ. ಆನ್‌ಲೈನ್ ಮೂಲಕ ಮೊದಲ ಹಂತ ಪ್ರಾರಂಭವಾಗಲಿದ್ದು, ನಂತರ ರಾಜ್ಯ ಮತ್ತು ವಲಯ ಮಟ್ಟದ ಸುತ್ತುಗಳು ಮತ್ತು ರಾಷ್ಟ್ರೀಯದ ಫೈನಲ್‌ನಲ್ಲಿ ಕೊನೆಗೊಳ್ಳಲಿದೆ. ವಿವಿಧ ಹಂತಗಳಲ್ಲಿ ಆಕರ್ಷಕ ಬಹುಮಾನಗಳನ್ನು ವಿತರಿಸಲಾಗುವುದು ಎಂದು ಆರ್‌ಬಿಐ ತಿಳಿಸಿದೆ.

ನಿನ್ನೆ ಆರ್‌ಬಿಐ–90 ರಸಪ್ರಶ್ನೆ ಕಾರ್ಯಕ್ರಮವನ್ನು ಆನ್‌ಲೈನ್ ಮೂಲಕ ಪ್ರಾರಂಭಿಸಿದ ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್, ಈ ಸ್ಪರ್ಧೆಯು ವಿದ್ಯಾರ್ಥಿಗಳಲ್ಲಿ ರಿಸರ್ವ್ ಬ್ಯಾಂಕ್ ಮತ್ತು ಆರ್ಥಿಕ ಪರಿಸರ ವ್ಯವಸ್ಥೆಯ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಸಹಾಯಕವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಆರ್‌ಬಿಐ ತನ್ನ ಸಾರ್ವಜನಿಕ ಜಾಗೃತಿ ಅಭಿಯಾನಗಳ ಮೂಲಕ ಜವಾಬ್ದಾರಿಯುತ ಆರ್ಥಿಕ ನಡವಳಿಕೆಯನ್ನು ಬೆಳೆಸಲು ಮತ್ತು ಡಿಜಿಟಲ್ ಹಣಕಾಸು ಉತ್ಪನ್ನಗಳ ಸುರಕ್ಷಿತ ಮತ್ತು ಸುರಕ್ಷಿತ ಬಳಕೆಯ ಅಭ್ಯಾಸವನ್ನು ಅಭಿವೃದ್ಧಿಪಡಿಸಲು ಯುವಜನರನ್ನು ಪ್ರೋತ್ಸಾಹಿಸಲಿದೆ ಎಂದು ಅವರು ಹೇಳಿದ್ದಾರೆ.

****************

ಮುಂಬರುವ ಕಾಶ್ಮೀರ ವಿಧಾನಸಭಾ ಚುನಾವಣೆಗೆ ಬಿಜೆಪಿ ಪಕ್ಷದ ನಾಯಕ ರಾಮ್ ಮಾಧವ್ ಮತ್ತು ಕೇಂದ್ರ ಸಚಿವ ಜಿ.ಕಿಶನ್ ರೆಡ್ಡಿ ಅವರನ್ನು ಚುನಾವಣಾ ಉಸ್ತುವಾರಿಯಾಗಿ ನೇಮಿಸಲಾಗಿದೆ. ಕೇಂದ್ರಾಡಳಿತ ಪ್ರದೇಶಕ್ಕೆ ಸೆಪ್ಟೆಂಬರ್ 18 ಮತ್ತು 25 ಹಾಗೂ ಅಕ್ಟೋಬರ್ 1 ರಂದು ಮೂರು ಹಂತಗಳಲ್ಲಿ ಚುನಾವಣೆ ನಡೆಯಲಿದೆ.

****************

ಉದ್ಯೋಗಿಗಳ ಭವಿಷ್ಯ ನಿಧಿ ಸಂಸ್ಥೆ – ಇಪಿಎಫ್‌ಒ, ಈ ವರ್ಷದ ಜೂನ್‌ನಲ್ಲಿ 19 ಲಕ್ಷದ 29 ಸಾವಿರ ಸದಸ್ಯರನ್ನು ನೊಂದಾಯಿಸಿಕೊಂಡಿದ್ದು, ಕಳೆದ ವರ್ಷದ ಇದೇ ತಿಂಗಳಿಗೆ ಹೋಲಿಸಿದರೆ, ಶೇಕಡ 7.86 ರಷ್ಟು ಬೆಳವಣಿಗೆಯನ್ನು ದಾಖಲಿಸಿದೆ. ಹೆಚ್ಚಿದ ಉದ್ಯೋಗಾವಕಾಶಗಳು ಸೇರಿದಂತೆ ಹಲವಾರು ಅಂಶಗಳಿಂದ ಸದಸ್ಯತ್ವದ ನೊಂದಣಿ ಹೆಚ್ಚಾಗಲು ಕಾರಣವಾಗಿದೆ ಎಂದು ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಮಾಹಿತಿ ನೀಡಿದೆ.

****************

ಮುಂದಿನ ಕೆಲವು ದಿನಗಳ ಕಾಲ ದೇಶದ ಪೂರ್ವ, ಈಶಾನ್ಯ ಮತ್ತು ದಕ್ಷಿಣ ಭಾಗಗಳಲ್ಲಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಎಚ್ಚರಿಕೆ ನೀಡಿದೆ.

ಹವಾಮಾನ ಇಲಾಖೆಯ ಪ್ರಕಾರ, ಈ ತಿಂಗಳ 25 ರವರೆಗೆ ಪಶ್ಚಿಮ ಬಂಗಾಳ, ಸಿಕ್ಕಿಂ, ಅರುಣಾಚಲ ಪ್ರದೇಶ ಬಿಹಾರ, ಜಾರ್ಖಂಡ್, ಒಡಿಶಾ, ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ ಮತ್ತು ತ್ರಿಪುರಾದಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ.

ಇದೇ ಅವಧಿಯಲ್ಲಿ ತಮಿಳುನಾಡು, ಪುದುಚೇರಿ, ಕಾರೈಕಲ್, ಲಕ್ಷದ್ವೀಪ, ಕರಾವಳಿ ಕರ್ನಾಟಕ, ಕರಾವಳಿ ಆಂಧ್ರಪ್ರದೇಶ, ಯಾನಂ, ರಾಯಲಸೀಮಾ, ತೆಲಂಗಾಣಗಳಲ್ಲಿಯೂ ಸಹ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಕೇರಳ ಮತ್ತು ಮಾಹೆಯಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ.

ಹವಾಮಾನ ಇಲಾಖೆ, ಕೇರಳದ ಆರು ಜಿಲ್ಲೆಗಳಲ್ಲಿ ಇಂದು ಆರೆಂಜ್ ಅಲರ್ಟ್ ಘೋಷಿಸಿದ್ದು, ಭಾರೀ ಮಳೆಯಾಗುವ ಮುನ್ಸೂಚನೆ ನೀಡಿದೆ. ಪತ್ತನಂತಿಟ್ಟ, ಕೊಟ್ಟಾಯಂ, ಇಡುಕ್ಕಿ, ಮಲಪ್ಪುರಂ, ಕೋಯಿಕ್ಕೋಡ್ ಮತ್ತು ವಯನಾಡ್ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಕೇರಳ ಮತ್ತು ಲಕ್ಷದ್ವೀಪದ ಕರಾವಳಿಯಲ್ಲಿ 55 ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇರುವುದರಿಂದ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ತಿಳಿಸಿದೆ.

ಏತನ್ಮಧ್ಯೆ, ಜಲಾನಯನ ಪ್ರದೇಶಗಳಲ್ಲಿ ಭಾರೀ ಮಳೆಯ ಹಿನ್ನೆಲೆಯಲ್ಲಿ ನೀರಿನ ಮಟ್ಟವನ್ನು ಸರಿಹೊಂದಿಸಲು ಮುಜಿಯಾರ್ ಅಣೆಕಟ್ಟು ಮತ್ತು ಮಣಿಯಾರ್ ಬ್ಯಾರೇಜ್‌ನಿಂದ ನೀರನ್ನು ಬಿಡುಗಡೆ ಮಾಡುವ ಸಾಧ್ಯತೆಯಿದೆ ಎಂದು ಪತ್ತನಂತಿಟ್ಟದ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ. ಕಕ್ಕತ್ತರ್ ಮತ್ತು ಪಂಪಾ ದಡದಲ್ಲಿ ವಾಸಿಸುವವರಿಗೆ ಎಚ್ಚರಿಕೆ ವಹಿಸುವಂತೆ ತಿಳಿಸಲಾಗಿದೆ.

****************

ಜೋರ್ಡಾನ್‌ನ ಅಮನ್‌ನಲ್ಲಿ ನಡೆಯುತ್ತಿರುವ 17 ವರ್ಷದೊಳಗಿನ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ರೋನಕ್ ದಹಿಯಾ ಅವರು, ಗ್ರೀಕೋ–ರೋಮನ್ 110 ಕೆಜಿ ವಿಭಾಗದಲ್ಲಿ ಕಂಚು ಗೆದ್ದಿದ್ದಾರೆ.

ಪ್ರಸ್ತುತ ವಿಶ್ವದ 2ನೇ ಶ್ರೇಯಾಂಕದ ರೋನಕ್ ಅವರು, ಕಂಚಿನ ಪದಕಕ್ಕಾಗಿ ನಡೆದ ಪಂದ್ಯದಲ್ಲಿ ಟರ್ಕಿಯ ಎಮುರುಲ್ಲಾ ಕ್ಯಾಪ್ಕನ್ ಅವರನ್ನು 6–1 ಅಂತರದಿಂದ ಸೋಲಿಸಿದರು. ಇದಕ್ಕೂ ಮುನ್ನ ರೋನಕ್ ಸೆಮಿಫೈನಲ್ ಪಂದ್ಯದಲ್ಲಿ ಹಂಗೇರಿಯ ಎದುರಾಳಿ ಝೋಲ್ಟಾನ್ ಝಾಕೊ ವಿರುದ್ಧ 0–2 ಅಂತರದಿಂದ ಪರಾಭವಗೊಂಡಿದ್ದರು.

********ಮುಕ್ತಾಯ********